ಮಾನ್ಯ ಆಯುಕ್ತರು ರವರಿಂದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳ ವಿಶೇಷ ಮರುಸಮೀಕ್ಷೆ ಸಂಬಂಧ ಸಭೆ ನಡೆಸಿರುವ ಬಗ್ಗೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳ ವಿಶೇಷ ಮರುಸಮೀಕ್ಷೆ ಸಂಬಂಧ ಮಾನ್ಯ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ಇಂದು ಪಾಲಿಕೆ ಕೇಂದ್ರ ಕಛೇರಿ ಸಭಾಂಗಣ-01ರಲ್ಲಿ "ಪಾಲಿಕೆ ಮಟ್ಟದ ವಿಚಕ್ಷನಾ ಸಮಿತಿ ಸಭೆ" ನಡೆಯಿತು. ಈ ವೇಳೆ ವಿಶೇಷ ಆಯುಕ್ತರು(ಕಲ್ಯಾಣ) ಶ್ರೀ ರವೀಂದ್ರ, ಸಹಾಯಕ/ಉಪ ಆಯುಕ್ತರು(ಕಲ್ಯಾಣ) ಶ್ರೀ ಸೋಮಪ್ಪ ಕಡಕೋಳ, ವಲಯ ಜಂಟಿ ಆಯುಕ್ತರುಗಳಾದ ಶ್ರೀ ವೆಂಕಟಾಚಲಪತಿ. ಶ್ರಿ ನಾಗರಾಜ್, ಶ್ರೀ ನರಸಿಂಹಮೂರ್ತಿ, ಶ್ರೀಮತಿ ಪಲ್ಲವಿ ಹಾಗೂ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳ ಸಮೀಕ್ಷೆಯನ್ನು ಸಮರ್ಪಕವಾಗಿ ಮಾಡಬೇಕು. ಈ ಸಂಬಂಧ ಇನ್ನೂ ಒಳಚರಂಡಿ ಕಾಮಗಾರಿ ಪೂರ್ಣಗೊಳ್ಳದ ಪಾಲಿಕೆಗೆ ಹೊಸದಾಗಿ 110 ಹಳ್ಳಿಗಳು ಸೇರ್ಪಡೆಯಾಗಿರುವ ಹೊರವಲಯಗಳಲ್ಲಿ ಸಮೀಕ್ಷೆ ನಡೆಸಿ ಸಮಗ್ರ ವರದಿಯನ್ನು ಸಿದ್ದಪಡಿಸುವಂತೆ ಆಯುಕ್ತರು ರವರು ವಲಯ ಜಂಟಿ ಆಯುಕ್ತರುಗಳಿಗೆ ಸೂಚನೆ ನೀಡಿದರು.

ಒಳಚರಂಡಿ/ಮಲವಿಸರ್ಜನೆ(ಪಿಟ್‌ಗಳಲ್ಲಿ) ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳು ಇಳಿಯಬಾರದೆಂದು ಕೇಂದ್ರ ಸರ್ಕಾರ ನಿಷೇಧವೇರಿದೆ. ಆದರೂ ಇನ್ನೂ ಕೆಲವೆಡೆ ಈ ಪದ್ದತಿ ಮುಂದುವರಿಯುತ್ತಿದೆ. ಆದ್ದರಿಂದ ಪಾಲಿಕೆ ವ್ಯಾಪ್ತಿಯಲ್ಲಿ ಸರಿಯಾಗಿ ಸಮೀಕ್ಷೆ ನಡೆಸಿ ಎಲ್ಲಾದರೂ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳು ಇನ್ನೂ ಕೆಲಸ ಮಾಡುತ್ತಿದ್ದರೆ ಕೂಡಲೆ ಅದನ್ನು ನಿಲ್ಲಿಸಿ ಅವರ ಜೀವನೋಪಾಯಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಸೂಕ್ತ ಕ್ರಮಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಾನೂನಿನ ಪ್ರಕಾರ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳು ಮಲವಿಸರ್ಜನೆ/ಒಳಚರಂಡಿಗಳಿಗೆ ಇಳಿದರೆ ಆ ಕೆಲಸ ಮಾಡಲು ಹೋದವರು ಹಾಗೂ ಕೆಲಸ ಮಾಡಿಸಿಕೊಂಡವರಿಬ್ಬರೂ ತಪ್ಪಿತಸ್ಥರಾಗಿ ಶಿಕ್ಷಾರ್ಹ ಅಪರಾಧಕ್ಕೆ ಒಳಗಾಗುತ್ತಾರೆ. ಇತ್ತೀಚಿನ ದಿನಗಳಲ್ಲಿ ತಂತ್ರಜ್ಞಾನ ಹೆಚ್ಚಿದ್ದು, ಒಳಚರಂಡಿ/ಪಿಟ್‌ಗಳನ್ನು ಸ್ವಚ್ಛಗೊಳಿಸಲು ಜಟ್ಟಿಂಗ್ ಹಾಗೂ ಇನ್ನಿತರೆ ಯಂತ್ರಗಳಿವೆ. ಆ ಯಂತ್ರಗಳ ಮೂಲಕವೇ ಸ್ವಚ್ಛ ಮಾಡಬೇಕು. ಮ್ಯಾನ್ಯುಯಲ್ ಆಗಿ ಸ್ವಚ್ಛ ಮಾಡುವಂತಿಲ್ಲ. ಈ ಹಿಂದೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳಾಗಿ ಕೆಲಸ ಮಾಡುತ್ತಿದ್ದವರಿಗೆ ಬೇರೆ ಕೆಲಸ ಮಾಡಲು ಅನುಕೂಲ ಮಾಡಿಕೊಡಬೇಕು. ಇಲ್ಲವಾದಲ್ಲಿ ಅವರ ಜೀವನೋಪಾಯಕ್ಕಾಗಿ ಅಗತ್ಯ ಸೌಲಭ್ಯ ಕಲ್ಪಿಸಬೇಕು. ಈ ಪೈಕಿ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮಕೈಗೊಂಡು ಸರಿಯಾಗಿ ಸಮೀಕ್ಷೆ ನಡೆಸಿ ಅಂತವರಿಗೆಲ್ಲಾ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಸಹಾಯಕ ಆಯುಕ್ತರು ಸೋಮಪ್ಪ ಕಡಕೋಳ ಮಾತನಾಡಿ, ಕೇಂದ್ರ ಹಾಗೂ ರಾಜ್ಯ ಸರ್ಕಾರದ ನಿರ್ದೇಶನದಂತೆ ಪಾಲಿಕೆ ವ್ಯಾಪ್ತಿಯಲ್ಲಿ ದಿನಾಂಕ:08.05.2013ರಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳ ಮೊದಲ ಸಮೀಕ್ಷೆ ನಡೆಸಿ ಪಾಲಿಕೆ ವ್ಯಾಪ್ತಿಯಲ್ಲಿ 201 ಮಂದಿಯನ್ನು ಗುರುತಿಸಲಾಗಿತ್ತು. ಸಮೀಕ್ಷೆಯಲ್ಲಿ ಗುರುತಿಸಿದವರಿಗೆ ಕೇಂದ್ರ ಸರ್ಕಾರವು 40,000 ರೂ. ಸಹಾಯಧನ ನೀಡಲಿದೆ. ಈ ಪೈಕಿ 71 ಮಂದಿಗೆ 40,000 ಸಹಾಯಧನ ನೀಡಲಾಗಿದೆ. ಇನ್ನುಳಿದವರಿಗೆ ಸಹಾಯಧನ ನೀಡಲು ಅಗತ್ಯ ದಾಖಲೆಗಳನ್ನು ಪಡೆದು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ. ಇದೀಗ ಹೊಸದಾಗಿ ಪಾಲಿಕೆ 8

ವಲಯಗಳ ಪೈಕಿ ಯಲಹಂಕ, ಬೊಮ್ಮನಹಳ್ಳಿ ಹಾಗೂ ದಾಸರಹಳ್ಳಿ ವಲಯ ಹೊರತುಪಡಿಸಿ ನಡೆಸಿದ ಸಮೀಕ್ಷೆಯಲ್ಲಿ 1,139 ಮಂದಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳನ್ನು ಗುರುತಿಸಲಾಗಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಿದರು.

ಈ ವೇಳೆ ಆಯುಕ್ತರು ರವರು ಮಾತನಾಡಿ, ಪಾಲಿಕೆ ವ್ಯಾಪ್ತಿಯಲ್ಲಿ ಈ ಹಿಂದೆ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳಾಗಿ ಕೆಲಸ ಮಾಡುತ್ತಿದ್ದವರನ್ನು ಗುರುತಿಸಿ ಕೂಡಲೆ ಪಟ್ಟಿ ಸಿದ್ದಪಡಿಸಬೇಕು. ಇದಲ್ಲದೆ ಹೊರ ವಲಯಗಳಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳು ಇನ್ನೂ ಕೆಲಸ ಮಾಡುತ್ತಿದ್ದಾರೆಯೇ ಎಂಬುದನ್ನು ಸಮೀಕ್ಷೆ ನಡೆಸಿ ಪತ್ತೆಹಚ್ಚಬೇಕು. ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಗಳಾಗಿ ಕೆಲಸ ಮಾಡಿದವರಿಗೆ ಕೇಂದ್ರ ಸರ್ಕಾರ ನೀಡುವ ಸಹಾಯಧನದ ಜೊತೆಗೆ ಹೆಚ್ಚಿನ ಸಹಾಯಧನ ನೀಡಲು ಅಗತ್ಯ ಕ್ರಮವಹಿಸಬೇಕು. ಮನೆ ಇಲ್ಲದವರಿಗೆ ಒಂಟಿಮನೆ ಯೋಜನೆಯಡಿ ಮನೆಗಳನ್ನು ಕಟ್ಟಿಕೊಡಬೇಕು. ಅಲ್ಲದೆ ಅವರ ಮಕ್ಕಳ ವಿದ್ಯಾಭ್ಯಾಸಕ್ಕೆ ಸಹಾಯಧನ ಕೊಡಲು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಕಲ್ಯಾಣ ವಿಭಾಗದ ಅಧಿಕಾರಿಗೆ ಸೂಚನೆ ನೀಡಿದರು.